ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 60 ಮೈಅಪ್ರಾ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 22.11.2018.

ಅಧಿಸೂಚನೆ

ವಿಷಯ: ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರಡಿ ಖಾಸಗಿ ಬಡಾವಣೆಗಳ ವಿನ್ಯಾಸ ನಕ್ಷೆಗಳನ್ನು ಅನುಮೋದನೆ ನೀಡಲಾಗಿದ್ದು, 2005ನೇ ಸಾಲಿನಿಂದ 2015ನೇ ಸಾಲಿನವರೆಗಿನ ಅವಧಿಯಲ್ಲಿ ಅನುಮೋದನೆಗೊಂಡಿರುವ ವಿನ್ಯಾಸಗಳಲ್ಲಿನ ನಿವೇಶನಗಳನ್ನು ಬಿಡುಗಡೆಗೊಳಿಸುವ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಮಾರ್ಗಸೂಚಿಗಳನ್ನು ಹೊರಡಿಸುವ ಕುರಿತು.

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಂ: ನಅಇ 112 ಬೆಂರೂಪ್ರಾ 2005, ದಿನಾಂಕ: 26.05.2005.
2. ಸರ್ಕಾರದ ಸುತ್ತೋಲೆ ಸಂ: ನಅಇ 599 ಮೈಅಪ್ರಾ 2012, ದಿನಾಂಕ: 03.12.2012.
3. ಸರ್ಕಾರದ ಸುತ್ತೋಲೆ ಸಂ: ನಅಇ 08 ಟಿಟಿಪಿ 2013, ದಿನಾಂಕ: 24.05.2014.
4. ಸರ್ಕಾರದ ಪತ್ರ ಸಂ: ನಅಇ 239 ಬಿಎಂಆರ್ 2012, ದಿನಾಂಕ: 27.09.2014.
5. ಸರ್ಕಾರದ ಅಧಿಸೂಚನೆ ಸಂ: ಸಂವ್ಯಶಾಇ 24 ಶಾಸನ 2015, ದಿನಾಂಕ: 10.09.2015 ರಲ್ಲಿ ಹೊರಡಿಸಿರುವ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ, 2015.

~*~* * *~*~

ನಗರಾಭಿವೃದ್ಧಿ ಪ್ರಾಧಿಕಾರಗಳು / ಯೋಜನಾ ಪ್ರಾಧಿಕಾರಗಳು ಹಾಗೂ ಪೌರ ಯೋಜನಾ ಪ್ರಾಧಿಕಾರಗಳು ಖಾಸಗಿ ವಿನ್ಯಾಸಗಳನ್ನು ಅನುಮೋದಿಸಿದ ನಂತರ ವಿನ್ಯಾಸಗಳ ಅಭಿವೃದ್ಧಿ ಹಾಗೂ ನಿವೇಶನಗಳ ಬಿಡುಗಡೆಯ ಕುರಿತು ಜರುಗಿಸಬೇಕಾದ ಕ್ರಮದ ಬಗ್ಗೆ ಉಲ್ಲೇಖ (1), (2) ಹಾಗೂ (3) ರ ಸರ್ಕಾರದ ಸುತ್ತೋಲೆಗಳಲ್ಲಿ ನಿರ್ದೇಶನ ನೀಡಲಾಗಿರುತ್ತದೆ. ದಿನಾಂಕ: 10.09.2015ರಿಂದ ಉಲ್ಲೇಖ (5)ರ ಸರ್ಕಾರದ ಅಧಿಸೂಚನೆಯು ಜಾರಿಯಲ್ಲಿದ್ದು, ಖಾಸಗಿ ವಿನ್ಯಾಸಗಳನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿಪಡಿಸಿದ ನಂತರ ನಿವೇಶನಗಳ ಬಿಡುಗಡೆ ಮಾಡಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ, 2015ರಲ್ಲಿ ವಿಧಿಪಡಿಸಲಾಗಿರುತ್ತದೆ. ಇದಕ್ಕೆ ಪೂರ್ವದಲ್ಲಿ ಪ್ರಾಧಿಕಾರದಿಂದ ಅನುಮೋದಿಸಲಾದ ವಿನ್ಯಾಸಗಳನ್ನು ಅನುಮೋದನೆಗೊಂಡ 05 ವರ್ಷಗಳ ಒಳಗಾಗಿ ಅಭಿವೃದ್ಧಿಪಡಿಸಲು ಉಲ್ಲೇಖ (1) ರ ಸುತ್ತೋಲೆಯ ನಿರ್ದೇಶನವಿರುತ್ತದೆ.

..2..

ಉಲ್ಲೇಖ (4)ರ ಸರ್ಕಾರದ ಪತ್ರದಲ್ಲಿ ವಿನ್ಯಾಸ ಅನುಮೋದನೆಗೊಂಡು 5 ವರ್ಷಗಳು ಕಳೆದ ನಂತರ ಅಭಿವೃದ್ಧಿಪಡಿಸಿ ಬಾಕಿ ನಿವೇಶನಗಳನ್ನು ಪ್ರಾಧಿಕಾರದಿಂದ ಬಿಡುಗಡೆ ಮಾಡುವಂತೆ ಕೋರಿ ಬರುವ ಪ್ರಸ್ತಾವನೆಗಳಿಗೆ ಪ್ರತಿ ವರ್ಷದ ನಿವೇಶನದ ಮಾರ್ಗಸೂಚಿ ಬೆಲೆಯ ಶೇ.2ರಷ್ಟು ದಂಡ ವಿಧಿಸಿ ಉಳಿದ ಶೇ.40ರಷ್ಟು ನಿವೇಶನಗಳನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಬಹುದೆಂದು ಪತ್ರದ ಮುಖೇನ ನಿರ್ದೇಶನ ನೀಡಲಾಗಿರುತ್ತದೆ.

ಸದರಿ ನಿರ್ದೇಶನವನ್ನು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ WP.No. 12468-12472/2017 ಮತ್ತು WP No. 12473-12474/2017 (LB-RES) ರಲ್ಲಿ ಪ್ರಶ್ನಿಸಲಾಗಿದ್ದು, ಉಲ್ಲೇಖ (4)ರಲ್ಲಿ ನೀಡಿರುವ ನಿರ್ದೇಶನವನ್ನು ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 04.07.2017ರ ಆದೇಶದಲ್ಲಿ ಅನೂರ್ಜಿತಗೊಳಿಸಿರುತ್ತದೆ.

ವರ್ಷಾನುಗಟ್ಟಲೆಯಿಂದ ನಿವೇಶನಕ್ಕಾಗಿ ಕಾಯುತ್ತಿರುವ ನಿವೇಶನ ರಹಿತ / ವಸತಿ ರಹಿತ ಸಾರ್ವಜನಿಕರ ಹಿತದೃಷ್ಟಿಯಿಂದ ಅನುಮೋದಿತ ವಿನ್ಯಾಸಗಳನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿಗೊಳಿಸಿ ಬಾಕಿ ನಿವೇಶನಗಳನ್ನು ಪ್ರಾಧಿಕಾರಗಳಿಂದ ಬಿಡುಗಡೆ ಮಾಡಿಸಿಕೊಳ್ಳಲು ಒಂದು ವರ್ಷದ ಕಾಲಾವಕಾಶ ನೀಡಿ ನಂತರದ ಅವಧಿಯಲ್ಲಿ ಬರುವಂತಹ ಪ್ರಕರಣಗಳಲ್ಲಿ ಬಿಡುಗಡೆಗೆ ಬಾಕಿ ಇರುವ ನಿವೇಶನಗಳ ಮಾರ್ಗಸೂಚಿ ಬೆಲೆಯ ಶೇ.3 ರಷ್ಟು ಮೊತ್ತವನ್ನು ದಂಡದ ರೂಪದಲ್ಲಿ ಯೋಜನಾ ಪ್ರಾಧಿಕಾರಗಳಿಗೆ ಪಾವತಿಸಿಕೊಂಡು ನಿವೇಶನಗಳನ್ನು ಬಿಡುಗಡೆಗೊಳಿಸುವುದು ಸೂಕ್ತವಾಗಿರುತ್ತದೆ.

ಮೇಲ್ಕಂಡ ವಿವರಗಳ ಹಿನ್ನೆಲೆಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 76K ರಲ್ಲಿರುವ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, 2005 ರಿಂದ 2015ನೇ ಸಾಲಿನವರೆಗಿನ ಅವಧಿಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17ರಡಿ ವಿನ್ಯಾಸ ನಕ್ಷೆ ಮಂಜೂರಾತಿ ಪಡೆದು ಸಂಪೂರ್ಣವಾಗಿ ಅಭಿವೃದ್ಧಿಪಡಿಸದೇ ಇರುವ ಪ್ರಕರಣಗಳಲ್ಲಿ ಈ ಕೆಳಕಂಡಂತೆ ಕ್ರಮವಹಿಸಲು ಆದೇಶಿಸಿದೆ.

1. 2005ನೇ ಸಾಲಿನಿಂದ 2015ನೇ ಸಾಲಿನ ಅವಧಿಯಲ್ಲಿ ಅನುಮೋದನೆಗೊಂಡಿರುವ ವಿನ್ಯಾಸಗಳನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿಪಡಿಸದೇ ಇರುವಂತಹ ಪ್ರಕರಣಗಳನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಈ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಒಂದು ವರ್ಷದ ಅವಧಿಯಲ್ಲಿ ಅನುಮೋದಿತ ವಿನ್ಯಾಸದಲ್ಲಿನ ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣ ಪ್ರಮಾಣದಲ್ಲಿ ಪೂರ್ಣಗೊಳಿಸಿ ಬಾಕಿ ಇರುವ ನಿವೇಶನಗಳನ್ನು ಬಿಡುಗಡೆ ಮಾಡಲು ಕೋರಿ ಬರುವ ಪ್ರಸ್ತಾವನೆಗಳಿಗೆ ಯಾವುದೇ ದಂಡವಿಲ್ಲದೇ ಬಿಡುಗಡೆಗೊಳಿಸತಕ್ಕದ್ದು.
2. ಈ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಒಂದು ವರ್ಷದ ಅವಧಿ ಮೀರಿದ ನಂತರ ಅನುಮೋದಿತ ವಿನ್ಯಾಸದಲ್ಲಿನ ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣ ಪ್ರಮಾಣದಲ್ಲಿ ಪೂರ್ಣಗೊಳಿಸಿ ನಿವೇಶನ ಬಿಡುಗಡೆ ಕೋರಿ ಬರುವಂತಹ ಪ್ರಸ್ತಾವನೆಗಳಲ್ಲಿ ಬಿಡುಗಡೆಗೆ ಬಾಕಿ ಇರುವ ನಿವೇಶನಗಳ ಮಾರ್ಗಸೂಚಿ ಬೆಲೆಯ ಮೇಲೆ ಪ್ರತಿ ವರ್ಷಕ್ಕೆ ಶೇ.3ರಷ್ಟು ಮೊತ್ತವನ್ನು ದಂಡದ ರೂಪದಲ್ಲಿ ಸಂಬಂಧಿಸಿದ ಯೋಜನಾ ಪ್ರಾಧಿಕಾರಗಳು ಪಾವತಿಸಿಕೊಂಡು ಉಳಿಕೆ ನಿವೇಶನಗಳನ್ನು ಬಿಡುಗಡೆಗೊಳಿಸತಕ್ಕದ್ದು.

..3..

3. ಈ ಅಧಿಸೂಚನೆಯಲ್ಲಿನ ಅಂಶಗಳು ದಿನಾಂಕ: 26.05.2005 ರಿಂದ ದಿನಾಂಕ: 10.09.2015 ರವರೆಗೆ ಅನುಮೋದಿಸಲಾಗಿರುವ ಖಾಸತಿ ವಿನ್ಯಾಸಗಳಿಗೆ ಮಾತ್ರ ಅನ್ವಯವಾಗಲಿದ್ದು, ದಿನಾಂಕ: 10.09.2015 ರ ನಂತರದಲ್ಲಿ ಉಲ್ಲೇಖ (5) ರ ಅಧಿಸೂಚನೆಯನ್ವಯ ಕಟ್ಟುನಿಟ್ಟಾಗಿ ಕ್ರಮ ಕೈಗೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

ಕರ್ನಾಟಕ ರಾಜ್ಯ ಪತ್ರ ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಮೇಲ್ಕಂಡ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ವಿಶೇಷ ಪತ್ರದಲ್ಲಿ ಪ್ರಕಟಿಸಿ ನಗರಾಭಿವೃದ್ಧಿ ಇಲಾಖೆ (ಅಭಿವೃದ್ಧಿ ಪ್ರಾಧಿಕಾರ) ಶಾಖೆಗೆ 500 ಪ್ರತಿಗಳನ್ನು ಒದಗಿಸಲು ಕೋರಿದೆ.

ಪ್ರತಿಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ

1. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
2. ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಆಲಿ ಆಸ್ಕರ್ ರಸ್ತೆ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನ ನಿರ್ದೇಶಕರು, ಬೆಂಗಳೂರು.
4. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
5. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ಯೋಜನಾ ಪ್ರಾಧಿಕಾರಗಳು.
6. ಪೌರಾಯುಕ್ತರು / ಮುಖ್ಯಾಧಿಕಾರಿ / ಎಲ್ಲಾ ನಗರಸಭೆ / ಪುರಸಭೆ / ಯೋಜನಾ ಪ್ರಾಧಿಕಾರಗಳು.
7. ಹೆಚ್ಚುವರಿ ಪ್ರತಿ / ರಕ್ಷಾ ಕಡತ.